5. ಕರ್ನಾಟಕ ಅಬ್ಕಾರಿ ತೆರಿಗೆ (ತಿದ್ದುಪಡಿ) ವಿಧೇಯಕ, 2013

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2013 ನೇ ಸಾಲಿನ ಕರ್ನಾಟಕ ಅಬ್ಕಾರಿ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು. ಈಗ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಹೀಗಿದೆ, "2013 ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು"

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು
ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.
ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ
ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕೃತವಾಗಿದೆ.

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2013 ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–6)

(ಅ) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2013

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಗದೀಶ್ ಶೆಟ್ಟರ್(ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2013 ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು